**Bangalore**
**Regional News**

**21.05.2025** **2.30 p.m.**

ಆಕಾಶವಾಣಿ, ಬೆಂಗಳೂರು

**ಪ್ರದೇಶ ಸಮಾಚಾರ**

<u>ಮುಖ್ಯಾಂಶಗಳು</u>

೧. ಭಾರತದ ಕಡಲ ಪುನರುಜ್ಜೀವನದಲ್ಲಿ ಐಎನ್‌ಎಸ್‌ವಿ ಕೌಂಡೀನ್ಯ ಐತಿಹಾಸಿಕ ಹೆಜ್ಜೆ; ಕೇಂದ್ರ ಸಚಿವ ಗಜೇಂದ್ರ ಸಿಂಗ್ ಶೇಖಾವತ್

೨. ಬೆಂಗಳೂರಿನಲ್ಲಿ ಕೂಡಲೇ ರಾಜಕಾಲುವೆ ಒತ್ತುವರಿ ತೆರವು ಗೊಳಿಸುವಂತೆ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಸೂಚನೆ

೩. ರಾಜ್ಯದ ಐದು ನವೀಕೃತ ರೈಲು ನಿಲ್ದಾಣಗಳು ನಾಳೆ ಪ್ರಧಾನಿಯವರಿಂದ ವರ್ಚ್ಯುಯಲ್ ಮೂಲಕ ಲೋಕಾರ್ಪಣೆ

೪. ಆಂಧ್ರಪ್ರದೇಶಕ್ಕೆ ನಾಲ್ಕು ಕುಮ್ಕಿ ಆನೆಗಳನ್ನು ಹಸ್ತಾಂತರಿಸಿದ ರಾಜ್ಯಸರ್ಕಾರ

೫. ಖ್ಯಾತ ಲೇಖಕಿ ಬಾನುಮುಸ್ತಾಕ್ ಅವರಿಗೆ ಪ್ರತಿಷ್ಠಿತ ಬೂಕರ್ ಪ್ರಶಸ್ತಿ - ಮುಖ್ಯಮಂತ್ರಿ ಸೇರಿದಂತೆ ಗಣ್ಯರಿಂದ ಅಭಿನಂದನೆ

**********

ಐಎನ್‌ಎಸ್‌ವಿ ಕೌಂಡಿಣ್ಯ ದೇಶದ ಅಭಿವೃದ್ಧಿ ಮತ್ತು ಸಂಸ್ಕೃತಿಯ ಪ್ರತಿರೂಪ ಎಂದು ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರಸಿಂಗ್ ಶೇಖಾವತ್ ತಿಳಿಸಿದ್ದಾರೆ. ಅವರು ಉತ್ತರಕನ್ನಡ ಜಿಲ್ಲೆಯ ಕಾರವಾರದ ಐ.ಎನ್.ಎಸ್. ಕದಂಬ ನೌಕಾನೆಲೆಯಲ್ಲಿ ಸಾಂಪ್ರದಾಯಿಕ ಶೈಲಿಯಲ್ಲಿ ನಿರ್ಮಿಸಿದ ಐಎನ್‌ಎಸ್‌ವಿ ಕೌಂಡಿಣ್ಯವನ್ನು ಭಾರತೀಯ ನೌಕಾಪಡೆಗೆ ಸೇರ್ಪಡೆಗೊಳಿಸಿ ಮಾತನಾಡಿದರು.ಐದನೇ ಶತಮಾನದ ಅಜಂತಾ ಗುಹೆಯ ವರ್ಣಚಿತ್ರದಿಂದ ಸ್ಫೂರ್ತಿ ಪಡೆದ ಈ ವಿಶಿಷ್ಟ ಹಡಗು ಪ್ರಾಚೀನ ಸಮುದ್ರಯಾನ ಸಂಪ್ರದಾಯವನ್ನು ಆಧುನಿಕ ವೈಜ್ಞಾನಿಕ ದೃಢೀಕರಣದೊಂದಿಗೆ ಸಂಯೋಜಿಸುತ್ತದೆ. ಈ ಹಡಗಿಗೆ ಹಿಂದೂ ಮಹಾ ಸಾಗರದಾದ್ಯಂತ ಆಗ್ನೇಯ ಏಷ್ಯಾಕ್ಕೆ ಪ್ರಯಾಣ ಬೆಳೆಸಿದ ಪೌರಾಣಿಕ ಭಾರತೀಯ ನಾವಿಕ ಮತ್ತು ಸನ್ಯಾಸಿ ಕೌಂಡಿನ್ಯ ಅವರ ಹೆಸರನ್ನು ಇಡಲಾಗಿದೆ, ಇದು ಭಾರತದ ಸಾಗರ ವಿನಿಮಯದ ಪ್ರಾಚೀನ ಸಂಪ್ರದಾಯಗಳು,

ಸಮುದ್ರಯಾನ ಮತ್ತು ಐತಿಹಾಸಿಕ ಪರಾಕ್ರಮವನ್ನು ಪ್ರತಿನಿಧಿಸಲಿದೆ ಎಂದು ತಿಳಿಸಿದ್ದಾರೆ.ಈ ಕ್ಷಣ ಸಾಂಸ್ಕೃತಿಕ ಮತ್ತು ಕಡಲ ಪುನರುಜ್ಜೀವನದ ಒಂದು ಮಹತ್ವದ ಕ್ಷಣವಾಗಿದೆ ಕೌಂಡಿಣ್ಯ ಪ್ರಾಚೀನ ವ್ಯಾಪಾರ ಮಾರ್ಗಗಳಲ್ಲಿ ತನ್ನ ಮೊದಲ ಪ್ರಯಾಣವನ್ನು ಪ್ರಾರಂಭಿಸಲಿದೆ.

ಧ್ವನಿ : ಸಚಿವ ಗಜೇಂದ್ರಸಿಂಗ್ ಶೇಖಾವತ್ (೩೦ ಸೆಕೆಂಡ್ಸ್)

**********

ರಾಜಧಾನಿ ಬೆಂಗಳೂರಿನ ಮಳೆ ಹಾನಿ ಪೀಡಿತ ಪ್ರದೇಶಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಇಂದು ನಗರ ಪ್ರದಕ್ಷಿಣೆ ನಡೆಸಿದರು.ಯಲಹಂಕದಲ್ಲಿ ರಾಜ ಕಾಲುವೆ ಒತ್ತುವರಿ ಸ್ಥಳ ಪರಿಶೀಲಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಮುಲಾಜಿಲ್ಲದೆ ಒತ್ತುವರಿ ತೆರವುಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.ಈ ವೇಳೆ ಮಾನ್ಯತಾ ಟೆಕ್, ಇಬ್ಸು, ಮ್ಯಾನ್ ಫೋ ಹಾಗೂ ಕಾರ್ಲೆ ಖಾಸಗಿ ಬಿಲ್ಡರ್ ಗಳು ರಾಜಕಾಲುವೆ ಒತ್ತುವರಿ ಮಾಡಿರುವುದನ್ನು ಅಧಿಕಾರಿಗಳು ವಿವರಿಸಿದ್ದಾರೆ. ಯಾವುದೇ ಮುಲಾಜಿಲ್ಲದೆ ರಾಜಕಾಲುವೆ ಒತ್ತುವರಿ ತೆರವುಗೊಳಿಸುವಂತೆ ಸೂಚನೆ ನೀಡಿದ್ದಾರೆ.ಬಳಿಕ ಊಃಖ ಲೇಔಟ್, ತುಂಬಿ ಹರಿಯುತ್ತಿರುವ ರಾಜಕಾಲುವೆ ಪ್ರದೇಶ ವೀಕ್ಷಿಸಿದ ಮುಖ್ಯಮಂತ್ರಿಗಳು ರಾಜಕಾಲುವೆಯ ಹರಿವಿನ ಹಾದಿಯಲ್ಲಿ ರೈಲ್ವೇ ಟ್ರಾಕ್ ಇರುವ ಕಡೆ ಆಗಿರುವ ಬಾಟಲ್ ನೆಕ್ ಸರಿ ಪಡಿಸಲು, ನಿರ್ದೇಶನ ನೀಡಿದ್ದಾರೆ.ಮಳೆ ಬಾಧಿತ ಪ್ರದೇಶಗಳಲ್ಲಿ ಬೇಸ್ ಮೆಂಟ್ ಪಾರ್ಕಿಂಗ್, ಕೆಳ ಹಂತದಲ್ಲಿ ಮನೆ ನಿರ್ಮಾಣಕ್ಕೆ ಅವಕಾಶ ನೀಡದಂತೆ ನಗರ ಯೋಜನೆಯಲ್ಲಿ ಬದಲಾವಣೆ ತರುವಂತೆ ತಿಳಿಸಿದ್ದಾರೆ.

**********

ಅಮೃತ ಭಾರತ ರೈಲು ನಿಲ್ದಾಣ ಯೋಜನೆಯಡಿ ಅತ್ಯಾಧುನಿಕ ಸೌಲಭ್ಯಗಳಿಂದ ನವೀಕೃತಗೊಳಿಸಲಾಗಿದೆ. ನಾಳೆ ಬೆಳಿಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು ರಾಜ್ಯದ ಐದು ರೈಲು ನಿಲ್ದಾಣಗಳನ್ನು ವರ್ಚ್ಯುಯಲ್ ಮೂಲಕ ಲೋಕಾರ್ಪಣೆ ಮಾಡಲಿದ್ದಾರೆ.ಈ ಪೈಕಿ ಬೆಳಗಾವಿಯ ಗೋಕಾಕ ರೋಡ್ ರೈಲು ನಿಲ್ದಾಣ, ಕರ್ನಾಟಕ, ಮಹಾರಾಷ್ಟ್ರ ಮತ್ತು ಗೋವಾ ರಾಜ್ಯಗಳ ಮಾರುಕಟ್ಟೆಯ ಆಕರ್ಷಣೆ ಹಾಗೂ ಗೋಕಾಕ ಫಾಲ್ಸ್ ದಂತಹ ಪ್ರವಾಸಿ ಕೇಂದ್ರದ ದೃಷ್ಟಿಯಿಂದ ವಿಶೇಷ ಮಹತ್ವ ಪಡೆದುಕೊಂಡಿದೆ. ಬೆಳಗಾವಿ ಜಿಲ್ಲೆಯ ಪ್ರಮುಖ ರೈಲು ನಿಲ್ದಾಣವಾಗಿರುವ ಗೋಕಾಕ ರೋಡ್ ನಿಲ್ದಾಣ ೧೭ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಜಾಗತಿಕ

ಮಟ್ಟದ ಸೌಲ್ಯಗಳ ಮೂಲಕ ನವೀಕೃತಗೊಂಡು ವಿಶೇಷ ಗಮನ ಸೆಳೆಯುತ್ತಿದೆ. ಆಕಾಶವಾಣಿಯೊಂದಿಗೆ ಮಾತನಾಡಿರುವ ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ, ಪ್ರಮುಖ ರೈಲು ನಿಲ್ದಾಣವಾಗಿರುವ ಗೋಕಾಕ ರೋಡ್ ನಿಲ್ದಾಣ ನವೀಕರಣದಿಂದ ವ್ಯಾಪಾರಸ್ಥರಿಗೆ, ರೈತರಿಗೆ, ಕಾರ್ಮಿಕರಿಗೆ, ಪ್ರವಾಸಿಗರಿಗೆ ತುಂಬಾ ಅನುಕೂಲವಾಗಲಿದೆ. ಎಂದು ತಿಳಿಸಿದ್ದಾರೆ.

ಬೈಟ್ : ಈರಣ್ಣ ಕಡಾಡಿ:

**********

ಮಾನವ ಆನೆ ಸಂಘರ್ಷ ತಡೆಗಟ್ಟಲು ಅಕ್ಕ ಪಕ್ಕದ ರಾಜ್ಯಗಳ ಸಹಕಾರ ಅಗತ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.ರಾಜ್ಯದಿಂದ ಆಂಧ್ರ ಪ್ರದೇಶಕ್ಕೆ ರಾಜ್ಯಕ್ಕೆ ನಾಲ್ಕು ಕುಮ್ಕಿ ಆನೆಗಳನ್ನು ಹಸ್ತಾಂತರಿಸುವ ಒಡಂಬಡಿಕೆಗೆ ಇಂದು ಸಹಿ ಹಾಕಿದ ಬಳಿಕ ಆನೆಗಳನ್ನು ಹಸ್ತಾಂತರಿಸಿ ಮಾತನಾಡಿದ ಅವರು ದೇಶದಲ್ಲೇ ಆನೆ ಸಂಪತ್ತು ಹೆಚ್ಚಾಗಿರುವ ರಾಜ್ಯ ನಮ್ಮದು. ೬ ಸಾವಿರದ ೩೯೫ ಆನೆಗಳು ನಮ್ಮಲ್ಲಿವೆ ಎಂದು ಹೇಳಿದ್ದಾರೆ.ಮಾನವ, ಆನೆ ಸಂಘರ್ಷ ತಡೆಯುವುದರಿಂದ ಜೀವ ಹಾನಿ, ಬೆಳೆ ಹಾನಿ ತಪ್ಪಲಿದೆ. ಈ ಮಹತ್ವದ ಉದ್ದೇಶದಿಂದಲೇ ರಾಜ್ಯದಿಂದ ಆರು ಕುಮ್ಕಿ ಆನೆಗಳನ್ನು ಆಂಧ್ರ ಪ್ರದೇಶಕ್ಕೆ ಹಸ್ತಾಂತರಿಸಿದೆ ಎಂದು ಸ್ಪಷ್ಟಪಡಿಸಿದ್ದಾರೆ.ಈ ಸಂದರ್ಭದಲ್ಲಿ ಉಪಮುಮುಖ್ಯಂತ್ರಿ ಡಿ ಕೆ ಶಿವಕುಮಾರ್, ಆಂಧ್ರ ಪ್ರದೇಶ ಉಪಮುಖ್ಯಮಂತ್ರಿ ಪವನ್ ಕಲ್ಯಾಣ್ ಉಪಸ್ಥಿತರಿದ್ದರು.

**********

ಕನ್ನಡದ ಖ್ಯಾತ ಲೇಖಕಿ ಹಾಸನ ಮೂದ ಬಾನುಮುಸ್ತಾ ಕ್ ಅವರಿಗೆ ಲಂಡನ್ ನ ಪ್ರತಿಷ್ಠಿತ ಬೂಕರ್ ಪ್ರಶಸ್ತಿ ದೊರೆತಿದೆ. ಅವರ ಸಣ್ಣಕಥೆಗಳ ಅನುವಾದಿತ ಸಂಕಲನ 'ಹೃದಯ ದೀಪ' ಕ್ಕೆ ಈ ಪ್ರಶಸ್ತಿ ಲಭಿಸಿದ್ದು, ಈ ಕೃತಿಯನ್ನು ದೀಪಾಭಸ್ತಿ ಅವರು ಹಾರ್ಟ್ ಲ್ಯಾಂಪ್ ಎಂದು ಅನುವಾದಿಸಿದ್ದಾರೆ. ಲಂಡನ್ನಿನ ಟೇಟ್ ಮಾರ್ಡನ್‌ನಲ್ಲಿ ನಡೆದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪ್ರಶಸ್ತಿ ಸ್ವೀಕರಿಸಿದ ಅವರು, ತಮ್ಮ ಗೆಲುವು ವೈವಿದ್ಯತೆಗೆ ದೊರೆತ ಜಯ ಎಂದು ಬಣ್ಣಿಸಿದ್ದಾರೆ. ಇದೇ ಮೊದಲ ಬಾರಿಗೆ ಕನ್ನಡದ ಕೃತಿಯೊಂದಕ್ಕೆ ಪ್ರತಿಷ್ಠಿತ ಬೂಕರ್ ಪ್ರಶಸ್ತಿ ದೊರೆತಂದಾಗಿದ್ದು, ಪ್ರಶಸ್ತಿಯು ೫೭ ಲಕ್ಷ ೨೮ ಸಾವಿರ ರೂಪಾಯಿ ನಗದು ಬಹುಮಾನ ಒಳಗೊಂಡಿದೆ. ಅಂತಿಮ ಹಂತಕ್ಕೆ ೬ ಕೃತಿಗಳು ತಲುಪಿದ್ದು ಅವುಗಳ ಪೈಕಿ ಬಾನುಮುಸ್ತಾಕ್ ಅವರ ಕೃತಿ ಪ್ರಶಸ್ತಿಗೆ ಆಯ್ಕೆ ಆಗಿರುವುದು ಕನ್ನಡ ಸಾಹಿತ್ಯಕ್ಕೆ ವಿಶ್ವ ವೇದಿಕೆಯಲ್ಲಿ ದ್ಥಾನ ದೊರಕಿಸಿ ಕೊಟ್ಟಿದೆ. ಕಳೆದ ವರ್ಷ ಹಾಟ್

ಲ್ಯಾಂಪ್ ಅನುವಾದಿತ ಕೃತಿ ಪೆನ್ ಟ್ರಾನ್ಸ್ ಲೇಟ್ಸ್ ಪ್ರಶಸ್ತಿ ಪಡೆದಿತ್ತು. ಮುಖ್ಯಮಂತ್ರಿ ಸಿದ್ಧರಾಮಯ್ಯ ಬಾನುಮುಸ್ತಾ ಕ್ ಅವರನ್ನು ಜಾಲತಾಣ ಪೋಸ್ಟ್ ಮೂಲಕ ಅಭಿನಂದಿಸಿ, ಈ ನೆಲದ ಸೌಹಾರ್ದತೆ, ಜಾತ್ಯತೀತತೆ ಮತ್ತು ಸೋದರತ್ವದ ನಿಜ ಮೌಲ್ಯಗಳನ್ನು ಮೈಗೂಡಿಸಿಕೊಂಡು ಬರೆಯುತ್ತಿರುವ ಬಾನು ಮುಸ್ತಾಕ್ ಅವರು ಕನ್ನಡದ ಹಿರಿಮೆಯ ಬಾವುಟವನ್ನು ಅಂತಾರಾಷ್ಟ್ರೀಯ ಮಟ್ಟದಲ್ಲಿ ಹಾರಿಸಿ ನಮಗೆಲ್ಲ ಗೌರವ ತಂದುಕೊಟ್ಟಿದ್ದಾರೆ ಎಂದು ಬಣ್ಣಿಸಿದ್ದಾರೆ. ಕೇಂದ್ರಸಚಿವ ಹೆಚ್.ಡಿ.ಕುಮಾರಸ್ವಾಮಿ ಸಾಮಾಜಿಕ ಜಾಲತಾಣದಲ್ಲಿ ಬಾನು ಮುಷ್ತಾಕ್ ಅವರಿಂದ ಇದೇ ರೀತಿಯಲ್ಲಿ ಇನ್ನಷ್ಟು ಉತ್ತಮ ಕೃತಿಗಳು ಬರಲಿ. ಅವರಿಂದ ಕನ್ನಡ ಸಾಹಿತ್ಯಲೋಕ ಮತ್ತಷ್ಟು ಶ್ರೀಮಂತವಾಗಲಿ ಹಾಗೂ ಜಗತ್ತಿನ ಉದ್ದಗಲಕ್ಕೂ ಕನ್ನಡದ ಕಂಪು ಹರಡಲಿ ಎಂದು ಅಭಿನಂದಿಸಿದ್ದಾರೆ. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ.ಪುರುಷೋತ್ತಮ ಬಿಳಿಮಲೆ ಸಾಮಾಜಿಕ ಜಾಲತಾಣದಲ್ಲಿ ಅಭಿನಂದಿಸಿ, ೨೦೨೫ ರ ಬೂಕರ್ ಪ್ರಶಸ್ತಿ ಪಡೆದು ಬಾನುಮುಸ್ತಾಕ್ ಹಾಗೂ ದೀಪಾಭಸ್ತಿ ಇತಿಹಾಸ ನಿರ್ಮಿಸಿದ್ದಾರೆ ಎಂದು ಹೇಳಿದ್ದಾರೆ.

**********

ಅಪರೇಷನ್ ಸಿಂದೂರ್ ನಂತರ ವಿವಿಧ ಕ್ಷೇತ್ರದ ಗಣ್ಯರು ಹಾಗೂ ಸಾರ್ವಜನಿಕರು ಸೇನೆಯ ಬಗ್ಗೆ ಅಭಿಮಾನದ ಮಾತುಗಳನ್ನು ಆಡುತ್ತಿದ್ದಾರೆ. ನಿವೃತ್ತ ಯೋಧರು ಎನ್.ಸಿ.ಸಿ. ಅಧಿಕಾರಿಗಳು ಹೀಗೆ ಸೈನ್ಯಕ್ಕೆ ಸಂಬಂಧ ಪಟ್ಟವರು ಕೂಡ ಸೈನಿಕರಿಗೆ ಧೈರ್ಯ ತುಂಬಿ ದೇಶಾಭಿಮಾನದ ಮಾತುಗಳನ್ನು ಹೇಳುತ್ತಿದ್ದಾರೆ. ಗಡಿಭದ್ರತಾ ಪಡೆಯ ನಿವೃತ್ತಾ ಅಧಿಕಾರಿ ಬಸವರಾಜ ಭೀಮಪ್ಪ ಹೊಸಮನಿ ಆಕಾಶವಾಣಿಯೊಂದಿಗೆ ತಮ್ಮ ಅಭಿಪ್ರಾಯ ಹಂಚಿಕೊಂಡಿದ್ದಾರೆ.

ಧ್ವನಿ :ಭೀಮಪ್ಪ ಹೊಸಮನಿ

**********

ಮುಂಗಾರು ಹಂಗಾಮಿನಲ್ಲಿ ಅತಿವೃಷ್ಟಿ ಹಾಗೂ ನೆರೆಹಾವಳಿಯಂತಹ ಸಂದರ್ಭ ಎದುರಿಸುವ ಬಗ್ಗೆ ಈಗಿನಿಂದಲೇ ಸಿದ್ಧತೆ ಮಾಡಿಕೊಳ್ಳುವಂತೆ ಯಾದಗಿರಿ ಹೆಚ್ಚುವರಿ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದ್ದಾರೆ.ಯಾದಗಿರಿ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಮುಂಗಾರು ಹಂಗಾಮಿನಲ್ಲಿ ಅತಿವೃಷ್ಟಿಯಿಂದ ಆಗಬಹುದಾದ ಹಾನಿ ಕುರಿತು ಮುನ್ನೆಚ್ಚರಿಕಾ ಕ್ರಮ ಹಾಗೂ ಜಿಲ್ಲಾ ಮಟ್ಟದ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಗ್ರಾಮೀಣ ಹಾಗೂ ಪಟ್ಟಣ ಪ್ರದೇಶ ಗಳಲ್ಲಿನ ಚರಂಡಿ ಸ್ವಚ್ಛತೆಗೆ ವಿಶೇಷ ಗಮನ ನೀಡಬೇಕು ಎಂದು ತಿಳಿಸಿದ್ದಾರೆ.

**********

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ರಾಜ್ಯ ಮಟ್ಟದ ರಾಷ್ಟ್ರೀಯ ಡೆಂಗಿ ದಿನಾಚರಣೆ ಕಾರ್ಯಕ್ರಮವನ್ನು ಸರ್. ಪುಟ್ಟಣ್ಣ ಚೆಟ್ಟಿ ಪುರಭವನದಲ್ಲಿ ಹಮ್ಮಿಕೊಳ್ಳಲಾಗಿದ್ದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ರವರು ಇಂದು ಬೆಳಗ್ಗೆ ೧೦.೦೦ ಗಂಟೆಗೆ ಕಾರ್ಯಕ್ರಮವನ್ನು ಉದ್ಘಾಟಿಸಿದರು.

*****END*****